# ಕರ್ನಾಟಕ ಸರ್ಕಾರ

## ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು

ಸಂಖ್ಯೆ:ಎಫ್‌ಡಬ್ಲ್ಯೂಎಲ್(2)21/2019-20 ದಿನಾಂಕ: 12.11.2019

**ಸುತ್ತೋಲೆ**

ವಿಷಯ:- ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳ ಹುದ್ದೆಯಿಂದ ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳ ಹುದ್ದೆಗೆ ಪದೋನ್ನತಿ ನೀಡುವ ಬಗ್ಗೆ ಕಾರ್ಯ ನಿರ್ವಹಣಾ ವರದಿ ಮತ್ತು ಇತರೆ ದಾಖಲಾತಿಗಳನ್ನು ಸಲ್ಲಿಸುವ ಕುರಿತು.

ಉಲ್ಲೇಖ:- ನಿರ್ದೇಶನಾಲಯದ ಅಂತಿಮ ಜೇಷ್ಠತಾ ಪಟ್ಟಿಯ ಅಧಿಕೃತ ಜ್ಞಾಪನಾ ಪತ್ರ ಸಂ: ಎಫ್‌ಡಬ್ಲ್ಯೂಎಲ್(2)09/2019-20, ದಿನಾಂಕ:07.11.2019.

* * * *

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳಿಗೆ ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳ ಹುದ್ದೆಗೆ ಸಾರ್ವಜನಿಕ ಹಿತದೃಷ್ಟಿಯಿಂದ ಪದೋನ್ನತಿ ನೀಡುವ ಸಲುವಾಗಿ ಉಲ್ಲೇಖದನುಸಾರ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಅರ್ಹ ನೌಕರರುಗಳಿಗೆ Karhfw.Gov.inರಲ್ಲಿ ಪ್ರಕಟಿಸಿರುವ ಅಂತಿಮ ಜೇಷ್ಠತಾ ಪಟ್ಟಿಯಂತೆ ಈ ಕೆಳಕಂಡ ಜೇಷ್ಠತಾ ಸಂಖ್ಯೆಯ ನೌಕರರು ದೃಢೀಕೃತ ದಾಖಲಾತಿಗಳೊಂದಿಗೆ ಕಾರ್ಯ ನಿರ್ವಹಣಾ ವರದಿ ಮತ್ತು ಇತರೆ ದಾಖಲಾತಿಗಳನ್ನು ಸಲ್ಲಿಸುವುದು.

| | | |
|---|---|---|
| 01 | ಹೈ-ಕ ಭಾಗದ ನೌಕರರು | ಜೇಷ್ಠತಾ ಸಂಖ್ಯೆ 01 ರಿಂದ 06 |
| 02 | ಸಾಮಾನ್ಯ ವರ್ಗ | ಜೇಷ್ಠತಾ ಸಂಖ್ಯೆ 01 ರಿಂದ 120 |
| 03 | ಪರಿಶಿಷ್ಟ ಜಾತಿ | ಜೇಷ್ಠತಾ ಸಂಖ್ಯೆ 01 ರಿಂದ 120 |
| 04 | ಪರಿಶಿಷ್ಟ ಪಂಗಡ | ಜೇಷ್ಠತಾ ಸಂಖ್ಯೆ 01 ರಿಂದ 120 ರವರೆಗೆ |

1. ಐದು ವರ್ಷಗಳ ಕಾರ್ಯ ನಿರ್ವಹಣಾ ವರದಿ ನಿಗದಿತ ನಮೂನೆ (4,5,6 ಮತ್ತು 7 ನಿಯಮ)

ಎ) ಭಾಗ-I ವೈಯಕ್ತಿಕ ಮಾಹಿತಿ. ಬಿ) ಭಾಗ-II ಸ್ವಯಂ ಮೌಲ್ಯ ಮಾಪನ. ಸಿ) ಭಾಗ-III ವರದಿ. ಡಿ)ಭಾಗ-IV ಪುನರಾವಲೋಕನ. ಇ)ಭಾಗ-V ಅಂಗೀಕಾರ. ಎಫ್) ಭಾಗ-VI ಸಂವಹನ.

2015-16, 2016-17, 2017-18, 2018-19, 2019-20 ರವರೆಗೆ **ಪ್ರತಿ ವರ್ಷಕ್ಕೆ ಪ್ರತ್ಯೇಕವಾಗಿ ಸಲ್ಲಿಸುವುದು. ( ಈ ಮಾದರಿಯಲ್ಲಿ ಸಲ್ಲಿಸದ ಕಾರ್ಯ ನಿರ್ವಹಣಾ ವರದಿಗಳನ್ನು ತಿರಸ್ಕರಿಸಲಾಗುವುದು)**

2. ಎಸ್.ಎಸ್.ಎಲ್.ಸಿ. ಅಂಕಪಟ್ಟಿ: ಜನ್ಮ ದಿನಾಂಕದೊಂದಿಗೆ ಕನ್ನಡ ಭಾಷಾ ಪರೀಕ್ಷೆ ಪಾಸು ಮಾಡಿರುವ ಬಗ್ಗೆ ಮತ್ತು ಕನ್ನಡ ವಿನಾಯಿತಿ ಪ್ರಮಾಣ ಪತ್ರ.
3. ನೇಮಕಾತಿ ಆದೇಶ/ಪದೋನ್ನತಿ ಹೊಂದಿದ ಆದೇಶ
4. ನೌಕರರ ಖಾಯಂ ಪೂರ್ವ ಸೇವಾವಧಿ ಘೋಷಣೆ ಪತ್ರ.
5. ಪದವಿ ಪ್ರಮಾಣ ಪತ್ರ.
6. ಅಕೌಂಟ್ಸ್ ಹೈಯರ್ ಪಾಸಾದ ಪ್ರಮಾಣ ಪತ್ರ.
7. ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡಗಳ ಇತ್ತೀಚಿನ ಪ್ರಮಾಣ ಪತ್ರ ಹಾಗೂ ಈ ಬಗ್ಗೆ ಸೇವಾ ಪುಸ್ತಕದಲ್ಲಿ ನಮೂದಿಸಿರುವ ನಕಲು ಪ್ರತಿ ಮತ್ತು ಸೇವೆಗೆ ಸೇರುವಾಗ ಯಾವ ಪ್ರವರ್ಗದಡಿ ನೇಮಕಗೊಂಡಿರುತ್ತಾರೆ.
8. ನೌಕರರ ವಿರುದ್ಧ ಇಲಾಖಾ ವಿಚಾರಣೆ: ಕ್ರಿಮಿನಲ್ ಮೊಕದ್ದಮೆ: ನ್ಯಾಯಾಲಯದ ಪ್ರಕರಣಗಳ ಬಗ್ಗೆ
9. ನೌಕರರ ಜೇಷ್ಠತಾ ಸಂಖ್ಯೆಯನ್ನು ನಮೂದಿಸುವುದು.
10. ಕಂಪ್ಯೂಟರ್ ಸಾಕ್ಷರತಾ ಪ್ರಮಾಣ ಪತ್ರ.
11. ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳ ಖಾಲಿ ಹುದ್ದೆಗಳ ವಿವರ.
12. ಹೈ ಕ ಭಾಗದ ನಮೂನೆ ಡಿ ಪ್ರತಿ.

**ಕ್ರ.ಸಂ. 01 ರಿಂದ 12 ರವರೆಗಿನ ಎಲ್ಲಾ ಪ್ರತಿಗಳನ್ನು ಸಂಬಂಧಪಟ್ಟ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಿಂದ ಕಡ್ಡಾಯವಾಗಿ ದೃಢೀಕರಿಸಿ ಸಲ್ಲಿಸುವುದು. ದೃಢೀಕರಿಸದ ಪ್ರತಿಗಳನ್ನು ಕಟ್ಟು ನಿಟ್ಟಾಗಿ ಪರಿಗಣಿಸಲಾಗುವುದಿಲ್ಲವೆಂದು ತಿಳಿಸಲಾಗಿದೆ.**

2ನೇ ಪುಟಕ್ಕೆ . . .

ಈ ಮೇಲ್ಕಂಡ ಎಲ್ಲಾ ಮಾಹಿತಿ ದಾಖಲೆಗಳನ್ನು ದೃಢೀಕರಿಸಿ ಸಕಾಲದಲ್ಲಿ ನಿರ್ದೇಶನಾಲಯಕ್ಕೆ ಸಲ್ಲಿಸುವುದು. ಸಕಾಲದಲ್ಲಿ ಮಾಹಿತಿ ಬಾರದೆ ನೌಕರರು ಪದೋನ್ನತಿ ವಂಚಿತರಾದಲ್ಲಿ ಸಂಬಂಧಪಟ್ಟ ಕಚೇರಿ ಮುಖ್ಯಸ್ಥರನ್ನೇ ನೇರವಾಗಿ ಜವಾಬ್ದಾರರನ್ನಾಗಿಸಲಾಗುವುದು. ಒಂದು ವೇಳೆ ನೌಕರರು ಪದೋನ್ನತಿ ನಿರಾಕರಿಸಿದ್ದಲ್ಲಿ ಲಿಖಿತ ರೂಪದಲ್ಲಿ ಪಡೆದು ಸೇವಾಪುಸ್ತಕದಲ್ಲಿ ನಮೂದಿಸಿ ದೃಢೀಕರಿಸುವುದು. ಈ ನೌಕರರುಗಳಲ್ಲಿ ನಿವೃತ್ತಿ/ ಪದೋನ್ನತಿ/ ಮರಣ ಹೊಂದಿದ್ದಲ್ಲಿ ಅಂತಹವರ ಮಾಹಿತಿ ನೀಡುವುದು. ಈ ಮಾಹಿತಿ **ಅತಿ ಜರೂರು** ಎಂದು ಪರಿಗಣಿಸಿ **ದಿನಾಂಕ:20.11.2019** ರೊಳಗೆ ಮಾಹಿತಿ ಸಲ್ಲಿಸಲು ಸೂಚಿಸಿದೆ.

ನಿರ್ದೇಶಕರು,
ಆರೋಗ್ಯ ಮತ್ತು ಕು.ಕ. ಸೇವೆಗಳು,
ಬೆಂಗಳೂರು.

ಪ್ರತಿಯನ್ನು ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:

1. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು-------------------
2. ಜಿಲ್ಲಾ ಶಸ್ತ್ರಚಿಕಿತ್ಸಕರು, ಜಿಲ್ಲಾ ಆಸ್ಪತ್ರೆ,------------------------------
3. ಹಿರಿಯ ಕಾರ್ಯಕ್ರಮಾಧಿಕಾರಿಗಳು, ಗಣಕಯಂತ್ರ ವಿಭಾಗ, ಆಕುಕ ಸೇವೆಗಳು, ಬೆಂಗಳೂರು ಇವರಿಗೆ ಇಲಾಖೆಯ ಅಂತರ್ಜಾಲದಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.
4. ಆದೇಶದ ಪ್ರತಿ/ಕಛೇರಿ ಪ್ರತಿ.